ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಂ. ನಾಗರಾಜು, ಇವರು ಶೂನ್ಯ ವೇಳೆಯಲ್ಲಿ **"ದಿನಾಂಕ: 06-02-2023 (ಸೋಮವಾರ) ಪ್ರಜಾವಾಣಿ ದಿನಪತ್ರಿಕೆಯಲ್ಲಿ ಬಾಲ್ಯವಿವಾಹ ತಡೆ-ಸರ್ಕಾರಕ್ಕೆ ಆಸಡ್ಡೆ, ಜನರಿಗೆ ಬೇಕಿಲ್ಲ", ಎಂಬ ವಿಚಾರವು ವರದಿಯಾಗಿರುತ್ತದೆ.**

**ದೇಶದಲ್ಲಿ ಮತ್ತು ರಾಜ್ಯದಲ್ಲಿ ಬಾಲ್ಯ ವಿವಾಹವು ಅವ್ಯಾಹತವಾಗಿ ಯಾವುದೇ ನಿರ್ಬಂಧಗಳಿಲ್ಲದೆ ಕಾನೂನನ್ನು ಮೀರಿ ನಡೆಯುತ್ತಿದೆಯೆಂದು ಸರ್ಕಾರದ ದಾಖಲೆಗಳಿಂದ ಸ್ಪಷ್ಟವಾಗಿ ಗೋಚರಿಸುತ್ತದೆ. ಕರ್ನಾಟಕ ರಾಜ್ಯದ 14 ಜಿಲ್ಲೆಗಳಲ್ಲಿ ಬಾಲ್ಯ ವಿವಾಹ ಏರಿಕೆಯಾಗಿರುವುದು ಇದಕ್ಕೆ ನಿದರ್ಶನ. 2014-15ನೇ ಸಾಲಿನ ಎನ್.ಎಫ್.ಹೆಚ್.ಎಸ್-4ರ ದತ್ತಾಂಶ ಮತ್ತು ದತ್ತಾಂಶ-3ರನ್ನು ಹೋಲಿಸದಲ್ಲಿ ಕೆಳಕಂಡ ವಿಷಯವು ಸ್ಪಷ್ಟವಾಗುತ್ತದೆ. ವಿಜಯಪುರ, ಕಲಬುರ್ಗಿ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ಯಾದಗಿರಿ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಮಹಿಳೆಯರು ತಮಗೆ 18 ವರ್ಷ ತುಂಬುವ ಮೊದಲೇ ವಿವಾಹವಾಗಿತ್ತು ಎಂಬ ಮಾಹಿತಿಯನ್ನು ನೀಡಿರುತ್ತಾರೆ. ರಾಮನಗರ ಮತ್ತು ದಕ್ಷಿಣಕನ್ನಡ ಮುಂತಾದ ಕೆಲವೆ ಜಿಲ್ಲೆಗಳಲ್ಲಿ ಬಾಲ್ಯವಿವಾಹವು ಕಡಿಮೆಯಾಗಿರುವುದು ಕಂಡುಬರುತ್ತದೆ.**

**ಬಾಲ್ಯ ವಿವಾಹ ತಡೆಯುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳು ಏನೇನು ಸಾಲದೆಂಬುದು ಎನ್.ಎಫ್.ಹೆಚ್.ಎಸ್. ದತ್ತಾಂಶಗಳಿಂದ ಕಂಡುಬರುತ್ತದೆ. ಆದಕಾರಣ ಸದರಿ ವಿಚಾರದಲ್ಲಿ ಸರ್ಕಾರವು ಕೂಡಲೇ ಕ್ರಮ ಕೈಗೊಂಡು ರಾಜ್ಯದಲ್ಲಿ ಬಾಲ್ಯವಿವಾಹವನ್ನು ತಡೆಗಟ್ಟುವ ದೆಸೆಯಲ್ಲಿ ಕಾನೂನಿನ ಅನುಷ್ಠಾನವನ್ನು ಮತ್ತಷ್ಟು ಬಿಗಿಗೊಳಿಸಿ ಈ ಗಂಬೀರ ಸಮಸ್ಯೆಯನ್ನು ಅಂತ್ಯಗೊಳಿಸಬೇಕೆಂದು"** ಪ್ರಸ್ತಾಪಿಸಿರುವ ವಿಷಯಕ್ಕೆ ಮಾನ್ಯ ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ :

ಬಾಲ್ಯವಿವಾಹ ನಿಷೇಧ ಕಾಯಿದೆ-2006, ಕಾಯಿದೆಯು ಕೇಂದ್ರದ ಕಾಯಿದೆಯಾಗಿದ್ದು, ಸದರಿ ಕಾಯಿದೆಯನ್ನು ರಾಜ್ಯದಲ್ಲಿ ದಿನಾಂಕ:10-01-2007ರಿಂದ ಜಾರಿಗೆ ತರಲಾಗಿದೆ. ಬಾಲ್ಯವಿವಾಹವನ್ನು ತಡೆಯುವ ನಿಟ್ಟಿನಲ್ಲಿ ನಿವೃತ್ತ ನ್ಯಾಯಮೂರ್ತಿಗಳಾದ ಶ್ರೀ ಜಸ್ಟಿಸ್ ಶಿವರಾಜ್ ಪಾಟೀಲ್ ಇವರ ಅಧ್ಯಕ್ಷತೆಯಲ್ಲಿ ರಚಿಸಿದ ಸಮಿತಿಯ ಶಿಫಾರಸ್ಸಿನ ಮೇರೆಗೆ ರಾಜ್ಯದಲ್ಲಿ ಪ್ರತ್ಯೇಕವಾಗಿ ಬಾಲ್ಯವಿವಾಹ ನಿಷೇಧ ಕೋಶವನ್ನು ದಿನಾಂಕ:16-11-2011ರಿಂದ ಪ್ರಾರಂಭಿಸಲಾಗಿದೆ.

- ಬಾಲ್ಯ ವಿವಾಹ ನಿಷೇಧ ಕಾಯ್ದೆ 2006ನ್ನು ಕರ್ನಾಟಕದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಬಾಲ್ಯ ವಿವಾಹ ನಿಷೇಧ ಕರ್ನಾಟಕ ನಿಯಾವಳಿಗಳು-2014ನ್ನು ದಿನಾಂಕ: 21.10.2015 ರಿಂದ ಜಾರಿಗೊಳಿಸಲಾಗುತ್ತಿದೆ.

- 2016ರಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ-2006ಕ್ಕೆ ಕರ್ನಾಟಕ ಸರ್ಕಾರವು ತಿದ್ದುಪಡಿ ತಂದಿದ್ದು ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಅಧಿನಿಯಮ-2016 ದಿನಾಂಕ:03-03-2018 ರಿಂದ ಜಾರಿಗೆ ಬಂದಿರುತ್ತದೆ. ತಿದ್ದುಪಡಿ ಕಾಯ್ದೆಯ ಪ್ರಮುಖ ಅಂಶಗಳು ಈ ಕೆಳಕಂಡಂತಿವೆ:

1. ದಿನಾಂಕ 03-03-2018 ರಿಂದ ನೆರವೇರಿಸಲಾದ ಪ್ರತಿಯೊಂದು ಬಾಲ್ಯ ವಿವಾಹವು ಪ್ರಾರಂಭದಿಂದಲೇ ಅನೂರ್ಜಿತವಾಗತಕ್ಕದ್ದು.
2. "ಪ್ರತಿಯೊಬ್ಬ ಪೊಲೀಸ್ ಅಧಿಕಾರಿಯು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ನಡೆದ ಅಪರಾಧದ ಸಂಜ್ಞೇಯತೆಯನ್ನು ಗಮನಿಸಿ ಈ ಅಧಿನಿಯಮದಡಿ, ತಾನಾಗಿಯೇ ಕ್ರಮ ತೆಗೆದುಕೊಳ್ಳತಕ್ಕದ್ದು"

3. ಈ ಕಾಯ್ದೆಯಡಿ ಮಹಿಳೆಯರೂ ಕೂಡ ಕಾರಾವಾಸದ ಶಿಕ್ಷೆಗೆ ಅರ್ಹರಾಗಿರುತ್ತಾರೆ.

4. ಈ ತಿದ್ದುಪಡಿಯ ಸೆಕ್ಷನ್ 9 ಮತ್ತು 13ರ ಪ್ರಕಾರ ತಪ್ಪಿತಸ್ಥ ವಯಸ್ಕ ಪತಿ, ತಡೆಯಾಜ್ಞೆ ಉಲ್ಲಂಘಿಸಿದವರು ಕನಿಷ್ಟ ಒಂದು ವರ್ಷ ಆದರೆ ಎರಡು ವರ್ಷಗಳ ವರೆಗೆ ವಿಸ್ತರಿಸಬಹುದಾದ ಕಠಿಣ ಕಾರಾವಾಸದಿಂದ ಅಥವಾ ಒಂದು ಲಕ್ಷ ರೂಪಾಯಿಗಳವರೆಗೆ ಜುಲ್ಮಾನೆ ಅಥವಾ ಇವೆರಡರಿಂದಲೂ ಶಿಕ್ಷೆಗೆ ಗುರಿಯಾಗುವರು.

5. ಈ ತಿದ್ದುಪಡಿಯ ಸೆಕ್ಷನ್ 10 & 11ರ ಪ್ರಕಾರ ಬಾಲ್ಯವಿವಾಹ ನಡೆಸಿದ ಮತ್ತು ಉತ್ತೇಜಿಸಿದ ತಪ್ಪಿತಸ್ಥರು ಕನಿಷ್ಠ 1 ವರ್ಷದಿಂದ ಗರಿಷ್ಠ 2 ವರ್ಷಗಳವರೆಗೆ ಕಾರಾವಾಸ ಮತ್ತು 1 ಲಕ್ಷ ರೂ. ವರೆಗೆ ದಂಡದ ಶಿಕ್ಷೆಗೆ ಗುರಿಯಾಗುವರು.

6. ಬಾಲ್ಯ ವಿವಾಹ ನಿಷೇಧ ಕರ್ನಾಟಕ ನಿಯಾವಳಿಗಳು-2014ನ್ನು ಪರಿಷ್ಕರಣೆ ಮಾಡಲು ರಾಷ್ಟ್ರೀಯ ಕಾನೂನು ಶಾಲೆ ವಿಶ್ವವಿದ್ಯಾಲಯ, ಬೆಂಗಳೂರು (NLSU) ರವರ ಸಹಯೋಗದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.

➢ **ಕಳೆದ 3 ವರ್ಷಗಳ ಬಾಲ್ಯ ವಿವಾಹ ಪ್ರಕರಣಗಳ ವಿವರ.**

| ಕ್ರಂ ಸಂ | ವರ್ಷ | ಸ್ವೀಕರಿಸಿದ ದೂರುಗಳ ಸಂಖ್ಯೆ | ತಡೆದ ಸಂಖ್ಯೆ | ನಡೆದ ಸಂಖ್ಯೆ | ಎಫ್.ಐ.ಆರ್. ದಾಖಲಾದ ಸಂಖ್ಯೆ |
|---|---|---|---|---|---|
| 1 | 2019-20 | 1779 | 1623 | 156 | 130 |
| 2 | 2020-21 | 3007 | 2711 | 296 | 239 |
| 3 | 2021-22 | 2819 | 2401 | 418 | 311 |

➢ **ಬಾಲ್ಯವಿವಾಹ ನಿಷೇಧ ಕಾಯ್ದೆಯನ್ನು ಪರಿಣಾಮಕಾರಿ ಅನುಷ್ಠಾನಕ್ಕಾಗಿ ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.**

➢ ಸರ್ಕಾರವು ಅಧಿಸೂಚನೆ ಸಂಖ್ಯೆ: ಮಮಇ 377 ಮಮಅ 2004, ದಿನಾಂಕ:02-05-2008 ಮತ್ತು ಅಧಿಸೂಚನೆ ಸಂಖ್ಯೆ: ಮಮಇ 205 ಮಮಅ 2011, ದಿನಾಂಕ:28-05-2018ರನ್ವಯ ಶಿಕ್ಷಣ, ಪಂಚಾಯತ್ ರಾಜ್, ಕಂದಾಯ, ಪೊಲೀಸ್, ಸಮಾಜ ಕಲ್ಯಾಣ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯನ್ನೊಳಗೊಂಡಂತೆ ರಾಜ್ಯಾದ್ಯಂತ ಸುಮಾರು 58533 ಅಧಿಕಾರಿಗಳನ್ನು ಬಾಲ್ಯ ವಿವಾಹ ನಿಷೇಧಾಧಿಕಾರಿಗಳೆಂದು ಗುರುತಿಸಲಾಗಿದೆ. ಈ ಎಲ್ಲಾ ಅಧಿಕಾರಿಗಳಿಗೂ ತರಬೇತಿ ನೀಡಲಾಗಿದ್ದು, ಬಾಲ್ಯ ವಿವಾಹವನ್ನು ತಡೆಯಲು ಕ್ರಮವಹಿಸುತ್ತಿರುತ್ತಾರೆ.

➢ 2022-23ನೇ ಸಾಲಿನಲ್ಲಿ ಬಾಲ್ಯವಿವಾಹ ನಿಷೇಧ ಕಾಯ್ದೆ ಕುರಿತು ಬಾಗೀದಾರ ಇಲಾಖೆಗಳ ಬಾಲ್ಯವಿವಾಹ ನಿಷೇದಾಧಿಕಾರಿಗಳಿಗೆ ಅವರ ಕರ್ತವ್ಯ ನಿರ್ವಹಿಸಲು ಅನುಕೂಲವಾಗುವಂತೆ ಸಿದ್ಧಪಡಿಸಲಾಗಿರುವ ಕ್ರಮಬದ್ಧ ಕಾರ್ಯಾವಿಧಾನ (SOP) ಕುರಿತಂತೆ ತರಬೇತಿಗಾಗಿ ಪ್ರತಿ ಜಿಲ್ಲೆಗೆ ರೂ. 50,000/-ಗಳಂತೆ ಒಟ್ಟು ರೂ. 15,50,000/- ಅನುದಾನವನ್ನು 31 ಜಿಲ್ಲೆಗಳಿಗೆ ಬಿಡುಗಡೆ ಮಾಡಿ ತರಬೇತಿ ಹಮ್ಮಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ.

- 2022-23ನೇ ಸಾಲಿನಲ್ಲಿ ಬಾಲ್ಯವಿವಾಹ ನಿಷೇಧ ಕುರಿತು ಯುವಜನಾಂಗದಲ್ಲಿ ಅರಿವು ಮೂಡಿಸಲು ವಿವಿಧ ಇಲಾಖೆಗಳ ಸಹಕಾರದೊಂದಿಗೆ ಯುವ ಮೇಳ ಹಾಗೂ ಇತರ ಐಇಸಿ ಚಟುವಟಿಕೆಗಳನ್ನು ಕೈಗೊಳ್ಳಲು ರಾಜ್ಯದ 4 ವಿಭಾಗಗಳಲ್ಲಿನ ಬೆಳಗಾವಿ, ಚಾಮರಾಜನಗರ, ಯಾದಗಿರಿ ಮತ್ತು ತುಮಕೂರು ಜಿಲ್ಲೆಗಳಿಗೆ ರೂ. 5.00 ಲಕ್ಷಗಳಂತೆ ಒಟ್ಟು ರೂ. 20.00 ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.

- ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸುರಕ್ಷಿಣಿ:- ಬಾಲ್ಯ ವಿವಾಹದಿಂದ ಮಕ್ಕಳ ರಕ್ಷಣೆ ಹಾಗೂ ಅನುಸರಣಾ ಮಾಹಿತಿ ಬಾಲ್ಯವಿವಾಹ ನಿಷೇಧ ಕಾಯ್ದೆಯ ಸಮರ್ಪಕ ಅನುಷ್ಠಾನಕ್ಕಾಗಿ ಹಾಗೂ ಮೇಲ್ವಿಚಾರಣೆಗಾಗಿ ಸುರಕ್ಷಿಣಿ ಎಂಬ ವೆಬ್ ಪೋರ್ಟಲ್‌ನ್ನು NIC ಸಹಯೋಗದಿಂದ ಅಭಿವೃದ್ಧಿಪಡಿಸಲಾಗಿದ್ದು, ಸದರಿ ವೆಬ್ ಪೋರ್ಟಲ್ ಕುರಿತು ಪ್ರಕರಣಗಳ ದತ್ತಾಂಶ ಸಂಗ್ರಹಣೆಗೆ ಹಾಗೂ ಮೇಲ್ವಿಚಾರಣೆಗೆ ಅನುಕೂಲವಾಗುತ್ತಿದ್ದು, ಸದ್ಯದಲ್ಲಿಯೇ ಚಾಲನೆಗೆ ಕ್ರಮ ವಹಿಸಲಾಗುತ್ತಿದೆ.

- ಬಾಲ್ಯವಿವಾಹವನ್ನು ತಡೆಗಟ್ಟುವ ಉದ್ದೇಶದಿಂದ ಕೊಪ್ಪಳ ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನುಷ್ಠಾನಗೊಳಿಸಿರುವ ಸ್ಫೂರ್ತಿ ಯೋಜನೆಯನ್ನು ರಾಜ್ಯದ ಇತರೆ 5 ಜಿಲ್ಲೆಗಳಾದ ಬಾಗಲಕೋಟೆ, ಬೆಳಗಾವಿ, ಕಲಬುರ್ಗಿ, ರಾಯಚೂರು ಮತ್ತು ವಿಜಯಪುರ ಜಿಲ್ಲೆಗಳ 11 ತಾಲ್ಲೂಕು(ಹುನಗುಂದ, ಸವದತ್ತಿ, ಗೋಕಾಕ್, ಹುಕ್ಕೇರಿ, ಚಿಂಚೋಳಿ, ಜೇವರ್ಗಿ, ಲಿಂಗಸುಗೂರು, ದೇವದುರ್ಗ, ಮುದ್ದೇಬಿಹಾಳ, ಇಂಡಿ) ಗಳಲ್ಲಿ ಸ್ಫೂರ್ತಿ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಮಮಇ 95 ಮಮಅ 2022, ದಿನಾಂಕ: 24.01.2023ರನ್ವಯ ಅನುಷ್ಠಾನಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ.

**ಸಂಖ್ಯೆ: ಮಮಇ 28 ಮಮಅ 2023**

**(ಆಚಾರ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು